

# ನವೆಂಬರ್‌ನಲ್ಲಿ ಬರ್ತಿದೆ ಬನಾರಸ್!

‘ಬನಾರಸ್’ ಈ ಸಿನಿಮಾದ ಹೆಸರು ಕೇಳಲು ಶುರುವಾಗಿ ಕೆಲವು ವರ್ಷಗಳೇ ಕಳೆದಿವೆ. ಆರಂಭವಾದಾಗಿನಿಂದಲೇ ಕುತೂಹಲ ಹುಟ್ಟಿಸಿದ್ದ ‘ಬನಾರಸ್’, ಪೂರ್ಣಗೊಂಡಂದಿನಿಂದ ಯಾವಾಗ ಬಿಡುಗಡೆಯಾಗಬಹುದು ಎಂಬ ಕುತೂಹಲವನ್ನು ಹುಟ್ಟುಹಾಕಿದೆ. ಆ ಕುತೂಹಲಕ್ಕೆ ಒಗ್ಗರಣೆ ಹಾಕುವ ಹಾಗೆ ಕೆಲಕಾಲದ ಹಿಂದೆ ಆ ಸಿನಿಮಾದ ‘ಮಾಯಗಂಗೆ’ ಎಂಬ ಮೋಹಕ ಹಾಡು ಬಿಡುಗಡೆಗೊಂಡಿತ್ತು. ಆ ಹಾಡಿನ ಕಾವು ಆರುವಷ್ಟರಲ್ಲಿ ಚಿತ್ರ ಮತ್ತೊಮ್ಮೆ ಸದ್ದು ಮಾಡುತ್ತಿದೆ. ಈ ಬಾರಿಯ ಸದ್ದು ದೊಡ್ಡದಾಗಿಯೇ ಇದೆ. ಯಾಕೆಂದರೆ ಚಿತ್ರತಂಡ ‘ಬನಾರಸ್’ನ ಬಿಡುಗಡೆಯ ದಿನಾಂಕವನ್ನು ಘೋಷಣೆ ಮಾಡಿದೆ.

ನವೆಂಬರ್ 4ರಂದು ‘ಬನಾರಸ್’ ದೇಶದಾದ್ಯಂತ ಬಿಡುಗಡೆಯಾಗಲಿದೆ ಎಂದು ಚಿತ್ರತಂಡ ಘೋಷಿಸಿದೆ.

ಕನ್ನಡವೂ ಸೇರಿದಂತೆ ಐದು ಭಾಷೆಗಳಲ್ಲಿ ಬಿಡುಗಡೆಯಾಗುತ್ತಿರುವ ಈ ಸಿನಿಮಾವನ್ನು ಜಯತೀರ್ಥ ನಿರ್ದೇಶನ ಮಾಡಿದ್ದಾರೆ. ಝೈದ್ ಖಾನ್ ಅವರಿಗೆ ಇದು ಮೊದಲ ಸಿನಿಮಾ. ಈಗಾಗಲೇ ಚಿತ್ರರಂಗದಲ್ಲಿ ಗುರ್ತಿಸಿಕೊಂಡಿರುವ ನಾಯಕಿ ಸೋನಲ್ ಮೊಂತೆರೊ ಕೂಡ ಈ ಸಿನಿಮಾದ ಮೇಲೆ ಸಾಕಷ್ಟು ನಿರೀಕ್ಷೆ ಇಟ್ಟುಕೊಂಡಿದ್ದಾರೆ. ಈಗಾಗಲೇ ಚಿತ್ರದ ಪ್ರಚಾರ ಕಾರ್ಯಕ್ಕೆ ಚಿತ್ರತಂಡ ಯೋಜನೆ ಹಾಕಿಕೊಂಡಿದೆ.

ತಿಲಕ್‌ರಾಜ್ ಬಲ್ಲಾಳ ನಿರ್ಮಾಣ ಮಾಡಿರುವ ಈ ಸಿನಿಮಾದಲ್ಲಿ ಸುಜಯ್ ಶಾಸ್ತ್ರಿ, ಅಚ್ಯುತ್ ಕುಮಾರ್, ದೇವರಾಜ್ ಕೂಡ ಮುಖ್ಯಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ. ಬಿ. ಅಜನೀಶ್ ಲೋಕನಾಥ್ ಸಂಗೀತ ಸಂಯೋಜನೆ ಮತ್ತು ಅದ್ವೈತ ಗುರುಮೂರ್ತಿ ಛಾಯಾಗ್ರಹಣ ಈ ಚಿತ್ರಕ್ಕಿದೆ. ■



# ...ಲಂಡನ್ ಕೆಫೆ’ಯ ಬೆಂಕಿ ಚೆಂಡು

ಟೈಟಲ್ ಜಾಹೀರಾಗುವ ಮೊದಲಿನಿಂದಲೂ ಸದ್ದು ಮಾಡುತ್ತಿರುವ ‘ಆಫ್ಟರ್ ಆಪರೇಷನ್ ಲಂಡನ್ ಕೆಫೆ’ ಸಿನಿಪ್ರಿಯರಲ್ಲಿ ಸಾಕಷ್ಟು ಕುತೂಹಲ ಹುಟ್ಟಿಸಿದೆ. ಕವೀಶ್ ಶೆಟ್ಟಿ ನಾಯಕನಾಗಿ ನಟಿಸುತ್ತಿರುವ ಈ ಸಿನಿಮಾದಲ್ಲಿ ‘ಜೊತೆ ಜೊತೆಯಲಿ’ ಧಾರಾವಾಹಿಯ ಮೂಲಕ ಗುರ್ತಿಸಿಕೊಂಡಿರುವ ಮೇಘಾ ಶೆಟ್ಟಿ ನಾಯಕಿಯಾಗಿ ನಟಿಸುತ್ತಿದ್ದಾರೆ. ಗಣೇಶ್ ಅಭಿನಯದ ಸಿನಿಮಾದ ಮೂಲಕ ಹಿರಿತೆರೆಗೆ ಅಡಿಯಿಟ್ಟಿದ್ದ ಮೇಘಾ ನಾಯಕಿಯಾಗಿ ನಟಿಸುತ್ತಿರುವ ಎರಡನೇ ಸಿನಿಮಾ ಇದು. ಹಲವು ಭಾಷೆಗಳಲ್ಲಿ ರೂಪುಗೊಳ್ಳುತ್ತಿರುವ ಈ ಸಿನಿಮಾದ ಫಸ್ಟ್‌ಲುಕ್ ಮತ್ತು ಶೀರ್ಷಿಕೆಗಳೇ ಇದೊಂದು ಮಾಸ್ ಆ್ಯಕ್ಷನ್ ಸಿನಿಮಾ ಎಂಬುದನ್ನು ಒತ್ತಿ ಹೇಳುತ್ತಿದೆ.

ಇದೀಗ ಚಿತ್ರತಂಡ ಇನ್ನೊಂದು ಪಾತ್ರದ ಲುಕ್ ಅನ್ನು ರಿವೀಲ್ ಮಾಡಿದೆ. ಕಿರುತೆರೆ ನಟಿಯಾಗಿ ಸಾಕಷ್ಟು ಪ್ರಸಿದ್ಧರಾಗಿರುವ ಶಿವಾನಿ ಈಗ ‘ಆಫ್ಟರ್ ಆಪರೇಷನ್ ಲಂಡನ್ ಕೆಫೆ’ಯಲ್ಲಿ ಗನ್ ಹಿಡಿದು ಖಡಕ್ ಲುಕ್‌ನಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಅವರ ಹುಟ್ಟುಹಬ್ಬದಂದೇ ಬಿಡುಗಡೆಯಾಗಿರುವ ಈ ಪೋಸ್ಟರ್‌ನಲ್ಲಿ ಗನ್ ಹಿಡಿದು ನಿಂತಿರುವ ಶಿವಾನಿ ಅವರ ಖದರು ಅವರ ಪಾತ್ರದ ಕುರಿತೂ ಸುಳಿವು ಕೊಡುವಂತಿದೆ.

ಕನ್ನಡದ ಜೊತೆಗೆ ಮರಾಠಿ, ತಮಿಳು, ತೆಲುಗು, ಮಲಯಾಳಂ, ಹಿಂದಿಗಳಲ್ಲಿಯೂ ಬಿಡುಗಡೆಯಾಗುತ್ತಿರುವ ಈ ಸಿನಿಮಾವನ್ನು ರಾಘವೇಂದ್ರ ಅವರು ನಿರ್ದೇಶಿಸುತ್ತಿದ್ದಾರೆ. ವಿಜಯ್ ಕುಮಾರ್ ಹವರಾಲ್, ರಮೇಶ್ ಕೊಠಾರಿ ಮತ್ತು ದೀಪಕ್ ರಾಣೆ ಎಂಬವರು ಈ ಚಿತ್ರಕ್ಕೆ ಹಣ ಹೂಡುತ್ತಿದ್ದಾರೆ. ■

